**ಸಮಗ್ರ ಶಿಕ್ಷಣ ಕರ್ನಾಟಕ**

**ಹೊಸ ಸಾರ್ವಜನಿಕ ಕಛೇರಿಗಳ ಪೂರಕ ಕಟ್ಟಡ, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು – 560 001**

ಸಂಖ್ಯೆ: ಎಸ್.ಎಸ್.ಕೆ/ಕ್ಯೂ.ಎಂ.ಟಿ/ಕ್ರೀಡಾ ಚಟುವಟಿಕೆ

ದಿನಾಂಕ: 07.09.2023

**ಜ್ಞಾಪನ**

**ವಿಷಯ:** 2023-24 ನೇ ಸಾಲಿನಲ್ಲಿ Fit India ರಸಪ್ರಶ್ನೆ ಕಾರ್ಯಕ್ರಮವನ್ನು ಶಾಲೆಗಳಲ್ಲಿ ಆಯೋಜಿಸುವ ಬಗ್ಗೆ.

ಉಲ್ಲೇಖ: 1. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಶಿಕ್ಷಣ ಮಂತ್ರಾಲಯ, ನವದೆಹಲಿ ಇವರ ಪತ್ರ ಸಂಖ್ಯೆ: 15-1/2023-IS.4 ದಿನಾಂಕ: 05.09.2023

2. ಯುವಜನ ಮತ್ತು ಕ್ರೀಡಾ ಮಂತ್ರಾಲಯ, ನವದೆಹಲಿ ಇವರ ಪತ್ರ ಸಂಖ್ಯೆ: 19-2/ Fit India/Quiz/2023 ದಿನಾಂಕ: 01.09.2023.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ Fit India Mission ಯುವಜನ ಮತ್ತು ಕ್ರೀಡಾ ಮಂತ್ರಾಲಯದ Fit India ರಸಪ್ರಶ್ನೆ 2023 ಕಾರ್ಯಕ್ರಮವನ್ನು ದಿನಾಂಕ:29.08.2023 ರಂದು ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಮಾನ್ಯ ಯುವಜನ ಮತ್ತು ಕ್ರೀಡಾ ಮಂತ್ರಿಗಳು ಉದ್ಘಾಟಿಸಿರುತ್ತಾರೆ.

ಸದರಿ ಕಾರ್ಯಕ್ರಮವನ್ನು ಶಾಲೆಗಳಲ್ಲಿ ಹಮ್ಮಿಕೊಳ್ಳಲು ಮತ್ತು ವಿದ್ಯಾರ್ಥಿಗಳನ್ನು ನಾಮನಿರ್ದೇಶನ ಮಾಡಿ ನೋಂದಾಯಿಸಲು ದಿನಾಂಕ: 04.09.2023 ರಿಂದ 05.10.2023 ರವರೆಗೆ ಅವಕಾಶ ಕಲ್ಪಿಸಲಾಗಿದೆ.

2023ನೇ ಸಾಲಿನಲ್ಲಿ ಶಾಲೆಗಳಿಂದ ಕನಿಷ್ಟ 02 ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಪ್ರತಿ ವಿದ್ಯಾರ್ಥಿಗೆ ರೂ.100/-ಗಳ ಶುಲ್ಕವನ್ನು ನೀಡಿ Fit India website (www.fitindia.gov.in)ಇಲ್ಲಿ ನೋಂದಾಯಿಸಿಕೊಳ್ಳಬೇಕು. ಸದರಿ ಕಾರ್ಯಕ್ರಮವನ್ನು ಕ್ರಮವಾಗಿ ಶಾಲಾ ಮಟ್ಟ, ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ಪೂರ್ವಭಾವಿ ಮಟ್ಟ, ರಾಜ್ಯ ಮಟ್ಟ ಮತ್ತು ರಾಷ್ಟ್ರೀಯ ಮಟ್ಟ ಸೇರಿದಂತೆ 04 ವಿವಿಧ ಹಂತಗಳಲ್ಲಿ ನಡೆಸಲಾಗುವುದು. ರಸಪ್ರಶ್ನೆ ಕಾರ್ಯಕ್ರಮದ ಸಂಪೂರ್ಣ ವಿವರಗಳುಳ್ಳ ಸುತ್ತೋಲೆಯನ್ನು ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳು ಮತ್ತು ವಿದ್ಯಾರ್ಥಿಗಳು, Fit India ರಸಪ್ರಶ್ನೆ ಕಾರ್ಯಕ್ರಮದ ಬಗ್ಗೆ ಜಾಗೃತಿ ಮೂಡಿಸಿ ಗರಿಷ್ಠ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕ್ರಮವಹಿಸಲು ತಿಳಿಸಿದೆ. ಈ ಕಾರ್ಯಕ್ರಮದ ಆಯೋಜನೆ ಬಗ್ಗೆ ವರದಿ ಮತ್ತು ಛಾಯಾಚಿತ್ರಗಳನ್ನು ಉಪನಿರ್ದೇಶಕರು (ಆಡಳಿತ) ಇವರು ಕ್ರೋಢೀಕರಿಸಿ ದೃಢೀಕರಣದೊಂದಿಗೆ ರಾಜ್ಯ ಕಛೇರಿಗೆ ನೀಡುವುದು.

7/9/23

ನಿರ್ದೇಶಕರು (ಗುಣಮಟ್ಟ)
ಸಮಗ್ರ ಶಿಕ್ಷಣ ಕರ್ನಾಟಕ

ಕ್ರಮಕ್ಕಾಗಿ

- ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ.
- ಎಲ್ಲಾ ಜಿಲ್ಲೆಗಳ ಯೋಜನಾ ಉಪ ಸಮನ್ವಯಾಧಿಕಾರಿಗಳು, ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆ